# ಕರ್ನಾಟಕ ವಿಧಾನ ಪರಿಷತ್ತು

ಮಾನ್ಯ ವಿಧಾನ ಪರಿಷತ್ತು ಸದಸ್ಯರಾದ ಶ್ರೀ ಮರಿತಿಬ್ಬೇಗೌಡ ರವರ ನಿಯಮ 330 ಕ್ಕೆ ಉತ್ತರಿಸುವ ಬಗ್ಗೆ.

**ಪ್ರಶ್ನೆ**

ಸಮಾಜ ಕಲ್ಯಾಣ ಇಲಾಖೆಯಡಿಯ ಕ್ರೈಸ್ ವತಿಯಿಂದ ನಡೆಸುತ್ತಿರುವ ವಸತಿ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಖಾಯಂ ಶಿಕ್ಷಕರಿಗೆ ಡಿ.ಸಿಆರ್.ಜಿ, ಕೆ.ಜಿ.ಐ.ಡಿ, ಜ್ಯೋತಿ ಸಂಜೀವಿನಿ, ಆರೋಗ್ಯ ಸಿರಿ ಸೌಲಭ್ಯ ವಿಸ್ತರಣೆ, ವಸತಿ ಶಿಕ್ಷಣ ನಿರ್ದೇಶನಾಲಯ ರಚನೆ, ಕಿತ್ತೂರು ರಾಣಿ ಚೆನ್ನಮ್ಮ ಶಾಲೆಗಳನ್ನು ಮೇಲ್ದರ್ಜೆಗೇರಿಸುವುದು, ಸಕಾಲದಲ್ಲಿ ಪಠ್ಯಪುಸ್ತಕ, ತರಬೇತಿ ಮತ್ತು ಪಾಠೋಪಕರಣಗಳನ್ನು ಒದಗಿಸುವುದು, ಹಿಂದಿ ಉಪನ್ಯಾಸಕರ, ದೈಹಿಕ ಶಿಕ್ಷಣ ಶಿಕ್ಷಕರ ಹುದ್ದೆ ಸೃಜನೆ, ವಸತಿ ಶಾಲೆಗಳಲ್ಲೇ ವಾಸವಿರುವ ಖಾಯಂ ಶಿಕ್ಷಕರಿಗೆ ಶೇ 10% ರಷ್ಟು ವಿಶೇಷ ಭತ್ಯೆ ನೀಡದೆ ಇರುವುದು, ಎನ್.ಪಿ.ಎಸ್ ಯೋಜನೆಯಡಿಯ ಶಿಕ್ಷಕರಿಗೆ ಸರ್ಕಾರ ನೀಡಬೇಕಾದ ಪಾಲಿನ ಹಣವನ್ನು ಸಮಾನಾಂತರವಾಗಿ ಪಾವತಿಸದೆ ಇರುವುದು, ಟಿ.ಇ.ಟಿ ಪಾಸಗದೆ ಇರುವ ಶಿಕ್ಷಕರು ತರಬೇತಿ ಮತ್ತು ಪರೀಕ್ಷಾ ವೆಚ್ಚವಾಗಿ ರೂ.20,153/- ಗಳನ್ನು ಸಂದಾಯ ಮಾಡಲು ಆದೇಶಿಸಿರುವುದು. ಅಟಲ್ ಬಿಹಾರಿ ವಾಜಪೇಯಿ ವಸತಿ ಶಾಲೆಗಳಲ್ಲಿ ಸ್ನಾತಕೋತ್ತರ ಪದವೀದರ ಹುದ್ದೆಗಳನ್ನು ಸೃಜಿಸದೆ ಇರುವುದು ಹಾಗೂ ವಸತಿ ಶಾಲೆಗಳ ಉನ್ನತೀಕರಣ ಮಾಡದೆ ಇರುವುದರಿಂದ ಉಂಟಾದ ಗಂಭೀರ ಸಮಸ್ಯೆ ಕುರಿತು ಮಾನ್ಯ ಸಮಾಜ ಕಲ್ಯಾಣ ಸಚಿವರ ಗಮನ ಸೆಳೆಯಬಯಸುತ್ತೇನೆ.

**ಉತ್ತರ**

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯಲ್ಲಿ 833 ವಸತಿ ಶಾಲೆ/ ಕಾಲೇಜುಗಳು (ಪರಿಶಿಷ್ಟ ಜಾತಿ-503, ಪರಿಶಿಷ್ಟ ವರ್ಗ-156, ಹಿಂದುಳಿದ ವರ್ಗ-174) ಕಾರ್ಯನಿರ್ವಹಿಸುತ್ತಿವೆ. ಸದರಿ ವಸತಿ ಶಾಲೆಗಳಲ್ಲಿ ಒಟ್ಟು 19094 ಬೋಧಕ/ಬೋಧಕೇತರ ಹುದ್ದೆಗಳು ಮಂಜೂರಾಗಿದ್ದು, ಈ ಪೈಕಿ 6403 ಖಾಯಂ ಬೋಧಕ/ ಬೋಧಕೇತರ ಸಿಬ್ಬಂದಿಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಸದರಿ ಖಾಯಂ ಸಿಬ್ಬಂದಿಗಳಿಗೆ ಸಂಬಂಧಿಸಿದ ಸೇವಾ ಸೌಲಭ್ಯಗಳ ವಿವರ ಈ ಕೆಳಕಂಡಂತಿದೆ.

**ಡಿ.ಸಿ.ಆರ್.ಜಿ**

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದಡಿ ಕರ್ತವ್ಯ ನಿರ್ವಹಿಸುತ್ತಿರುವ ನೌಕರರಿಗೆ ದಿನಾಂಕ:01.04.2018 ರಿಂದ (DCRG) ಕುಂಟುಂಬ ಪಿಂಚಣಿ ಯೋಜನೆಯ ಸೌಲಭ್ಯವನ್ನು ವಿಸ್ತರಿಸಲು ಸರ್ಕಾರದ ಪತ್ರ ಸಂಖ್ಯೆ:ಸಕಇ 498 ಮೊದೇಶಾ 2018 ದಿನಾಂಕ 24.11.2018 ರಲ್ಲಿ ನೂತನ ಪಿಂಚಣಿ ಯೋಜನೆಯಡಿ ಬರುವ ಸರ್ಕಾರಿ ನೌಕರರಿಗೆ ಮಾತ್ರ ಎಂದು ಸ್ಪಷ್ಟವಾಗಿ ತಿಳಿಸಿರುವುದರಿಂದ ಈ ಸೌಲಭ್ಯವು ಸರ್ಕಾರದ ನಿಗಮ ಮಂಡಳಿಗಳು, ಸ್ವಾಯತ್ತ ಸಂಸ್ಥೆಗಳು ಹಾಗೂ ಸರ್ಕಾರದ ಅಧೀನದ ಇನ್ನಿತರ ಯಾವುದೇ ಸಂಘ ಸಂಸ್ಥೆಗಳ ನೌಕರರಿಗೆ ಅನ್ವಯಿಸುವುದಿಲ್ಲ. ಆದ್ದರಿಂದ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ನೌಕರರಿಗೆ ಈ ಸೌಲಭ್ಯವನ್ನು ವಿಸ್ತರಿಸಲು ಸಾಧ್ಯವಿಲ್ಲವೆಂದು ನಿರ್ದೇಶಿಸಿದೆ.

ಆದಾಗ್ಯೂ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವಸತಿ ಶಾಲೆಯ ಶಿಕ್ಷಕರಿಗೆ ಇತರೆ ಎಲ್ಲಾ ಸರ್ಕಾರಿ ನೌಕರರುಗಳಿಗೆ ಅನ್ವಯವಾಗುವಂತೆ, ದಿನಾಂಕ:01.04.2018 ರಿಂದ DCRG ಕುಟುಂಬ ಪಿಂಚಣಿ ಯೋಜನೆಯ ಸೌಲಭ್ಯವನ್ನು ವಿಸ್ತರಿಸುವ ಪ್ರಸ್ತಾವನೆಯು ಪ್ರಸ್ತುತ ಪ್ರಸ್ತಾವನೆಯು ಆರ್ಥಿಕ ಇಲಾಖೆಯಲ್ಲಿ ಪರಿಶೀಲನೆಯಲ್ಲಿದೆ.

**ಕೆ.ಜಿ.ಐ.ಡಿ.**

ಸರ್ಕಾರಿ ನೌಕರರಿಗೆ ನೀಡಲಾಗುವ ಕೆ.ಜಿ.ಐ.ಡಿ. ಸೌಲಭ್ಯವನ್ನು ವಿಸ್ತರಿಸುವ ಬಗ್ಗೆ ಸರ್ಕಾರದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವಸತಿ ಶಾಲೆಗಳ ನೌಕರರು ಖಾಯಂ ರಾಜ್ಯ ಸರ್ಕಾರಿ ನೌಕರರಿಗಾಗಿ ರೂಪಿಸಲಾಗಿರುವ ಕಡ್ಡಾಯ ಜೀವ ವಿಮಾ ನಿಯಮಗಳ ವ್ಯಾಪ್ತಿಗೆ ಒಳಪಡಿಸಲು ಅವಕಾಶವಿರುವುದಿಲ್ಲವೆಂದು ಆರ್ಥಿಕ ಇಲಾಖೆಯು ದಿನಾಂಕ:04.08.2018 ರಂದು ತಿರಸ್ಕರಿಸಿ ಹಿಂಬರಹ ನೀಡಿರುತ್ತದೆ.

**ಜ್ಯೋತಿ ಸಂಜೀವಿನಿ/ಆರೋಗ್ಯ ಸಿರಿ**

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವಸತಿ ಶಾಲೆ/ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಖಾಯಂ ಬೋಧಕ/ಬೋಧಕೇತರ ಸಿಬ್ಬಂದಿಗಳಿಗೆ ಜ್ಯೋತಿ ಸಂಜೀವಿನಿ ಯೋಜನೆ ಹಾಗೂ ನಗದು ರಹಿತ ಸೌಲಭ್ಯಗಳನ್ನು ನೀಡುವ ಸಂಬಂಧ ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ರವರಿಗೆ ಕೋರಲಾಗಿ, ಸದರಿ ಟ್ರಸ್ಟ್ ರವರು ದಿನಾಂಕ: 29.06.2021 ರಂದು ಸಭೆ ಸೇರಿ ಸಂಘದ ಖಾಯಂ ನೌಕರರು ಹಾಗೂ ಅವಲಂಬಿತ ಕುಟುಂಬದ ಸದಸ್ಯರುಗಳಿಗೆ ನಗದು ರಹಿತ ವೈದ್ಯಕೀಯ ಚಿಕಿತ್ಸೆ ಒದಗಿಸಲು ತಾತ್ವಿಕ ಒಪ್ಪಿಗೆ ನೀಡಿರುತ್ತಾರೆ. ಈ ಸಂಬಂಧ ಸದರಿ ಟ್ರಸ್ಟ್ ರವರು ನಗದು ರಹಿತ ವೈದ್ಯಕೀಯ ಸೌಲಭ್ಯ ನೀಡಲು ಹೆಚ್.ಆರ್.ಎಂ.ಎಸ್ ತಂತ್ರಾಂಶದಲ್ಲಿ ಸಂಘದಿಂದ ನೌಕರರ ಮತ್ತು ಅವಲಂಭಿತರ ಸಂಬಂಧಿಸಿದ ಮಾಹಿತಿಯನ್ನು ನಮೂದಿಸಲು ಉಂಟಾಗಿದ್ದ ತಾಂತ್ರಿಕ ದೋಷವನ್ನು ಸುವರ್ಣ ಆರೋಗ್ಯ ಸುರಕ್ಷಾ ಮತ್ತು ಹೆಚ್.ಆರ್.ಎಂ.ಎಸ್ ಸೆಲ್ ಅಧಿಕಾರಿಗಳ ಸಹಯೋಗದೊಂದಿಗೆ ತಾಂತ್ರಿಕ ದೋಷವನ್ನು ಪರಿಹರಿಸಲು ಕ್ರಮವಹಿಸಲಾಗುತ್ತಿದ್ದು, ಸದರಿ ಯೋಜನೆಯನ್ನು ಪೂರ್ಣ ಪ್ರಮಾಣದಲ್ಲಿ ಸರ್ಕಾರಿ ನೌಕರರಿಗೆ ಅನುಷ್ಠಾನಗೊಳಿಸಿದ ನಂತರ ಅನುದಾನ ಲಭ್ಯಪಡಿಸಿಕೊಂಡು ಪ್ರಸ್ತಾವನೆ ಸಲ್ಲಿಸಲು ಆರ್ಥಿಕ ಇಲಾಖೆಯು ತಿಳಿಸಿರುತ್ತದೆ.

**ವಸತಿ ಶಿಕ್ಷಣ ನಿರ್ದೇಶನಾಲಯ ರಚನೆ**

ರಾಜ್ಯದಲ್ಲಿ ವಿವಿಧ ವರ್ಗಗಳ ಗ್ರಾಮೀಣ ಪ್ರದೇಶದ ಬಡ ಮಕ್ಕಳ ಶೈಕ್ಷಣಿಕ ಅಭಿವೃದ್ಧಿಗಾಗಿ ಮತ್ತು ಎಲ್ಲಾ ವರ್ಗಗಳ ವಸತಿ ಶಾಲೆಗಳನ್ನು ಒಂದೇ ಸಂಸ್ಥೆಯ ಕಾರ್ಯವ್ಯಾಪ್ತಿಗೆ ಒಳಪಡಿಸುವ ಉದ್ದೇಶದಿಂದ ದಿನಾಂಕ:06-10-1999 ರಲ್ಲಿ "ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ"ವನ್ನು ಪ್ರಾರಂಭಿಸಲಾಗಿದೆ.

ಕರ್ನಾಟಕ ರಾಜ್ಯದ ಗ್ರಾಮೀಣ ಪ್ರದೇಶದ ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ ಮತ್ತು ಹಿಂದುಳಿದ ವರ್ಗದ ಬಡ ಮಕ್ಕಳ ಶೈಕ್ಷಣಿಕ ಅಭಿವೃದ್ಧಿಗಾಗಿ ಒಟ್ಟು 833 ವಸತಿ ಶಾಲೆ/ ಕಾಲೇಜುಗಳು ಕಾರ್ಯನಿರ್ವಹಿಸುತ್ತಿವೆ.

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘವು ಒಂದು ಬೃಹತ್ ಸಂಸ್ಥೆಯಾಗಿದ್ದು, ಸಾರ್ವಜನಿಕ ಸಂಪರ್ಕಕ್ಕೆ ಅನುಕೂಲಕರವಾಗಿದೆ ಮತ್ತು ಮಕ್ಕಳಿಗೆ ವಿದ್ಯಾಭ್ಯಾಸಕ್ಕೆ ಒಳ್ಳೆಯ ವಾತಾವರಣ ಕಲ್ಪಿಸಿಕೊಡಲು ಅನುಕೂಲಕರವಾಗಿರುವುದರಿಂದ ನಿರ್ದೇಶನಾಲಯವನ್ನಾಗಿ ಮಾರ್ಪಡಿಸಲು ಸಾಧ್ಯವಾಗಿರುವುದಿಲ್ಲ.

**ಸಕಾಲದಲ್ಲಿ ಪಠ್ಯಪುಸ್ತಕ ಮತ್ತು ಪಾಠೋಪಕರಣಗಳನ್ನು ಒದಗಿಸುವುದು**

ಸಂಘದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆ/ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಪಠ್ಯ ಪುಸ್ತಕಗಳನ್ನು ಕರ್ನಾಟಕ ಪಠ್ಯ ಪುಸ್ತಕ ಸಂಘದ ಮೂಲಕ ಸರಬರಾಜು ಮಾಡಲು ದಿನಾಂಕ: 20.03.2023 ಆದೇಶ ನೀಡಲಾಗಿದ್ದು, 6 ನೇ ತರಗತಿಯಿಂದ 10 ನೇ ತರಗತಿಯ ಸರಬರಾಜು ಪ್ರಕ್ರಿಯೆ ಪೂರ್ಣಗೊಂಡಿರುತ್ತದೆ.

ಪದವಿ ಪೂರ್ವ ಕಾಲೇಜುಗಳಿಗೆ ಪಠ್ಯಪುಸ್ತಕಗಳನ್ನು ಒದಗಿಸಲು ದಿನಾಂಕ: 03.06.2023 ರಂದು ಕರ್ನಾಟಕ ಪಠ್ಯ ಪುಸ್ತಕ ಸಂಘಕ್ಕೆ ಪತ್ರ ಬರೆಯಲಾಗಿದ್ದು, ಸರಬರಾಜು ಪ್ರಕ್ರಿಯೆ ಪೂರ್ಣಗೊಂಡಿರುತ್ತದೆ.

ಪಾಠೋಪಕರಣಗಳನ್ನು ವಾರ್ಷಿಕವಾಗಿ ಸರಬರಾಜು ಮಾಡುತ್ತಿದ್ದು, 2023-24 ನೇ ಸಾಲಿಗೆ ಅನುದಾನ ಲಭ್ಯತೆ ಆಧಾರದಮೇಲೆ ಒದಗಿಸಲು ಕ್ರಮವಹಿಸಲಾಗುತ್ತಿದೆ.

**ಹಿಂದಿ ಉಪನ್ಯಾಸಕರ ಹುದ್ದೆ ಸೃಜನೆ**

ಸಂಘದ ಅಧೀನದಲ್ಲಿ 26 ವಿಜ್ಞಾನ ಪದವಿ ಪೂರ್ವ ಕಾಲೇಜುಗಳು 15 ಅಟಲ್ ಬಿಹಾರಿ ವಾಜಪೇಯಿ ವಸತಿ ಶಾಲೆಗಳು, 12 ಏಕಲವ್ಯ ವಸತಿ ಶಾಲೆಗಳು, 30 ಉನ್ನತೀಕರಿಸಿದ ವಸತಿ ಶಾಲೆಗಳು ಒಟ್ಟು 83 ವಸತಿ ಪದವಿ ಪೂರ್ವ ಕಾಲೇಜುಗಳು ಕಾರ್ಯನಿರ್ವಹಿಸುತ್ತಿದ್ದು, ವಿಜ್ಞಾನ ಕಾಲೇಜುಗಳಲ್ಲಿ ಭಾಷಾ ವಿಷಯಗಳು ಕನ್ನಡ ಮತ್ತು ಇಂಗ್ಲೀಷ್ ಆಗಿರುವುದರಿಂದ ಹಿಂದಿ ಭಾಷೆ ಯನ್ನು ಪರಿಗಣಿಸಿರುವುದಿಲ್ಲವಾದ್ದರಿಂದ ಹಿಂದಿ ಉಪನ್ಯಾಸಕರ ಹುದ್ದೆ ಮಂಜೂರಾಗಿರುವುದಿಲ್ಲ. ಮುಂದಿನ ಆಡಳಿತ ಮಂಡಳಿ ಸಭೆಯಲ್ಲಿ ಚರ್ಚಿಸಿ ಕ್ರಮವಹಿಸಲಾಗುವುದು.

**ದೈಹಿಕ ಶಿಕ್ಷಣ ಶಿಕ್ಷಕರ ಹುದ್ದೆ ಸೃಜನೆ.**

ಸಂಘದ ಅಧೀನದ 804 ವಸತಿ ಶಾಲೆಗಳಲ್ಲಿ ದೈಹಿಕ ಶಿಕ್ಷಣ ಶಿಕ್ಷಕರ ಹುದ್ದೆ ಮಂಜೂರಾಗಿರುತ್ತದೆ. ಸದರಿ ಹುದ್ದೆಗಳ ಪೈಕಿ 505 ಖಾಯಂ ದೈಹಿಕ ಶಿಕ್ಷಣ ಶಿಕ್ಷಕರು ಕಾರ್ಯನಿರ್ವಹಿಸುತ್ತಿದ್ದಾರೆ.

**ಖಾಯಂ ಶಿಕ್ಷಕರಿಗೆ ಶೇ 10 ರಷ್ಟು ವಿಶೇಷ ಭತ್ಯೆ**

ವಸತಿ ಶಾಲೆಗಳ ಖಾಯಂ ಸಿಬ್ಬಂದಿಗಳಿಗೆ ಮೂಲ ವೇತನದ ಶೇ 10% ಶಾಲಾ ಕ್ಯಾಂಪಸ್ ವಿಶೇಷ ಭತ್ಯೆಯನ್ನು ಮಂಜೂರು ಮಾಡಲು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿರುತ್ತದೆ. ಸರ್ಕಾರದ ಕಡತ ಸಂಖ್ಯೆ: ಸಕಇ 64 ಮೊದೇಶಾ 2019ರದಿ: 27.08.2019ರಂತೆ ಆರ್ಥಿಕ ಇಲಾಖೆಗೆ ಈ ಕುರಿತು ಪ್ರಸ್ತಾವನೆ ಸಲ್ಲಿಸಲಾಗಿದ್ದು, ಆರ್ಥಿಕ ಇಲಾಖೆಯ ಟಿಪ್ಪಣಿಯಲ್ಲಿ 6ನೇ ರಾಜ್ಯ ವೇತನ ಆಯೋಗವು ತನ್ನ ವರದಿಯಲ್ಲಿ ಈ ರೀತಿಯ ಭತ್ಯೆಗೆ ಯಾವುದೇ ಶಿಫಾರಸ್ಸು ಮಾಡಿರುವುದಿಲ್ಲವಾದ್ದರಿಂದ ಈ ಕ್ಯಾಂಪಸ್ ವಿಶೇಷ ಭತ್ಯೆ ಕೋರಿಕೆಯನ್ನು ಒಪ್ಪಲು ಸಾಧ್ಯವಿಲ್ಲವೆಂದು ತಿಳಿಸಿದೆ. ಈ ಹಿನ್ನಲೆಯಲ್ಲಿ ಸದರಿ ವಿಶೇಷ ಭತ್ಯೆಯನ್ನು ಮಂಜೂರು ಮಾಡಲು 7 ನೇ ವೇತನ ಆಯೋಗಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ

**ಎನ್.ಪಿ.ಎಸ್**

ಸಂಘದ ವಸತಿ ಶಾಲೆ/ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಖಾಯಂ ಸಿಬ್ಬಂದಿಗಳಿಗೆ ಸರ್ಕಾರದ ಆದೇಶ ಸಂಖ್ಯೆ ಸಕ ಇ 39 ಎಂಡಿಎಸ್ 2020 ದಿ: 15.07.2022 ರಲ್ಲಿ ದಿನಾಂಕ 01.04.2019 ರಿಂದ ಜಾರಿಗೆ ಬರುವಂತೆ ಸರ್ಕಾರದ ವಂತಿಗೆಯನ್ನು ಶೇ 10 ರಿಂದ ಶೇ 14 ಕ್ಕೆ ಹೆಚ್ಚಿಸಿ ಆದೇಶಿಸಿದೆ.

ಸಂಘದ ಖಾಯಂ ಸಿಬ್ಬಂದಿಗಳಿಗೆ ಶೇ 14 ರಷ್ಟು ಸರ್ಕಾರದ ವಂತಿಗೆಯನ್ನು ಸಂಘದ ನೌಕರರ ವಂತಿಗೆಯ ವತ್ಯಾಸದ ಮೊತ್ತವನ್ನು ಪಾವತಿಸಲಾಗಿದೆ.

**ಕೃಪಾಂಕದ ಮೂಲಕ ನೇಮಕವಾದ ಶಿಕ್ಷಕರಿಗೆ ಟಿ.ಇ.ಟಿ ತರಬೇತಿ ಮತ್ತು ಪರೀಕ್ಷೆ ಆಯೋಜಿಸುವ ಬಗ್ಗೆ.**

SL.No: 14
10/07/2023

ಮಾನ್ಯ ನ್ಯಾಯಾಲಯದ ಆದೇಶದಂತೆ 2011 ರ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಪಡೆದ ಅಂಕಗಳು ಹಾಗೂ ಸೇವಾ ಕೃಪಾಂಕದ ಮೂಲಕ ಸಂಘದ ವಸತಿ ಶಾಲೆಗಳಿಗೆ ನೇಮಕ ವಾಗಿರುವ ಶಿಕ್ಷಕರಿಗೆ ವಸತಿ ಶಾಲೆಗಳ ವಿದ್ಯಾರ್ಥಿಗಳ ಶೈಕ್ಷಣಿಕ ಗುಣಮಟ್ಟದ ಹಿನ್ನಲೆಯಲ್ಲಿ ಟಿ.ಇ.ಟಿ ಪರೀಕ್ಷೆಯನ್ನು ಉತ್ತೀರ್ಣಗೊಳ್ಳುವ ಷರತ್ತಿಗೊಳಪಟ್ಟು ನೇಮಕಾತಿ ಆದೇಶವನ್ನು ಹೊರಡಿಸಲಾಗಿರುತ್ತದೆ. ಟಿ.ಇ.ಟಿ ಪರೀಕ್ಷೆಯನ್ನು ಪೂರ್ಣಗೊಳಿಸಿದ ಶಿಕ್ಷಕರಿಗೆ ಖಾಯಂ ಪೂರ್ವಾವಧಿಯನ್ನು ಘೋಷಿಸಿದ್ದು, ಟಿ.ಇ.ಟಿ ಪರೀಕ್ಷೆಯನ್ನು ಪೂರ್ಣಗೊಳಿಸದೇ ಇರುವ ಶಿಕ್ಷಕರಿಗೆ ತರಬೇತಿಯೊಂದಿಗೆ ಪರೀಕ್ಷೆಯನ್ನು ನಡೆಸಲು ಸಂಘದಿಂದ ಕ್ರಮವಹಿಸಲಾಗಿದ್ದು, ಸದರಿ ವೆಚ್ಚವನ್ನು ಸರ್ಕಾರದ ವತಿಯಿಂದಲೇ ಭರಿಸುವಂತೆ ಮಾನ್ಯ ಸಚಿವರು ನಿರ್ದೇಶಿಸಿರುವ ಹಿನ್ನಲೆಯಲ್ಲಿ 02 ಬಾರಿ ಟಿ.ಇ.ಟಿ ಪರೀಕ್ಷಾ ವೆಚ್ಚವನ್ನು ಸಂಘದ ವತಿಯಿಂದ ಭರಿಸಲಾಗುವುದು.

**ಅಟಲ್ ಬಿಹಾರಿ ವಾಜಪೇಯಿ ವಸತಿ ಶಾಲೆಗಳಲ್ಲಿ ಸ್ನಾತಕೋತ್ತರ ಪದವೀದರ ಹುದ್ದೆಗಳನ್ನು ಸೃಜಿಸದೇ ಇರುವುದು**

2012-13 ನೇ ಸಾಲಿನಲ್ಲಿ ಸರ್ಕಾರಿ ಆದೇಶ ಸಂಖ್ಯೆ: ಸಕಇ 150 ಮೊದೇಶಾ 2012 ದಿನಾಂಕ 23.11.2012 ಮತ್ತು ಸರ್ಕಾರಿ ಆದೇಶ ಸಂಖ್ಯೆ: ಸಕಇ 51 ಮೊದೇಶಾ 2012 ದಿನಾಂಕ 23.01.2013 ರಲ್ಲಿ ಮಂಜೂರಾಗಿರುವ ಪ್ರತಿ ಅಟಲ್ ಬಿಹಾರಿ ವಾಜಪೇಯಿ ವಸತಿ ಶಾಲೆಗಳಿಗೆ 18 ಸ್ನಾತಕೋತ್ತರ ಪದವೀಧರ ಶಿಕ್ಷಕರ ಹುದ್ದೆಗಳನ್ನು [ಕನ್ನಡ-2, ಆಂಗ್ಲಭಾಷೆ-2, ಹಿಂದಿ-2, ಗಣಿತ-2, ಭೌತಶಾಸ್ತ್ರ-2, ರಸಾಯನಶಾಸ್ತ್ರ-2, ಸಮಾಜ ವಿಜ್ಞಾನ-2, ಗಣಕ ವಿಜ್ಞಾನ-2, ದೈಹಿಕ ಶಿಕ್ಷಣ-2]. ರೂ 33450-62600 ವೇತನ ಶ್ರೇಣಿ ನಿಗಧಿಪಡಿಸಿ ಮಂಜೂರು ಮಾಡಲಾಗಿರುತ್ತದೆ.

**ಕಿತ್ತೂರು ರಾಣಿ ಚೆನ್ನಮ್ಮ ಶಾಲೆಗಳನ್ನು ಮೇಲ್ದರ್ಜೆಗೇರಿಸುವುದು.**

113 ಕಿತ್ತೂರು ರಾಣಿಚೆನ್ನಮ್ಮ ವಸತಿ ಶಾಲೆಗಳನ್ನು 11 ಮತ್ತು 12 ನೇ ತರಗತಿಗಳಿಗೆ ಉನ್ನತೀಕರಿಸುವ ಸಂಬಂಧ ಸಲ್ಲಿಸಲಾಗಿದ್ದ ಪ್ರಸ್ತಾವನೆಯನ್ನು ಪರಿಶೀಲಿಸಿ ಆರ್ಥಿಕ ಇಲಾಖೆಯ ರಾಜ್ಯದ ಆರ್ಥಿಕ ಪರಿಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು ಪ್ರಸ್ತಾವನೆಯನ್ನು ಸದ್ಯಕ್ಕೆ ಮುಂದೂಡುವಂತೆ ನಿರ್ದೇಶಿಸಲಾಗಿದೆ.

**ವಸತಿ ಶಾಲೆಗಳ ಉನ್ನತೀಕರಣ**

2016-17 ನೇ ಸಾಲಿನಲ್ಲಿ 30 ವಸತಿ ಶಾಲೆಗಳನ್ನು ಪದವಿ ಪೂರ್ವ ಕಾಲೇಜುಗಳನ್ನಾಗಿ ಉನ್ನತಿಕರಿಸಿದ್ದು, ಪ್ರಸ್ತುತ ಕಾರ್ಯನಿರ್ವಹಿಸುತ್ತಿವೆ. ಸದರಿ 30 ಉನ್ನತೀಕರಿಸಿದ ವಸತಿ ಶಾಲೆಗಳ ಪೈಕಿ 10 ಮೇಲ್ದರ್ಜೆಗೆರಿಸಿದ ವಸತಿ ಶಾಲೆಗಳಿಗೆ ಹುದ್ದೆಗಳು ಮಂಜೂರಾಗಿದ್ದು, ಬಾಕಿ 20 ವಸತಿ ಶಾಲೆಗಳಿಗೆ ಹುದ್ದೆಗಳ ಮಂಜೂರಾತಿ ಪ್ರಸ್ತಾವನೆ ಆರ್ಥಿಕ ಇಲಾಖೆಯ ಪರಿಶೀಲನೆಯಲ್ಲಿರುತ್ತದೆ.

2023-24 ನೇ ಸಾಲಿನಲ್ಲಿ ಸ್ವಂತ ಕಟ್ಟಡ ದಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ವಸತಿ ಶಾಲೆಗಳನ್ನು 11 ಮತ್ತು 12 ನೇ ತರಗತಿಯ ವರಗೆ ಉನ್ನತೀಕರಿಸಲು ಕೋರಿ ದಿನಾಂಕ: 23.06.2023 ರಂದು ಪ್ರಸ್ತಾವನೆ ಪರಿಶೀಲನೆಯಲ್ಲಿದೆ.

**ಸಕಇ 89 ಎಂಡಿಎಸ್ 2023**

(ಡಾ.ಹೆಚ್.ಸಿ. ಮಹದೇವಪ್ಪ)
ಸಮಾಜ ಕಲ್ಯಾಣ ಸಚಿವರು